## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಕೆ.ಮೊಹಮ್ಮದ್ ಇರ್ಫಾನ್, ಅಪರ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿಯೋಜನೆ ಮೇರೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಪ್ರಾಥಮಿಕ ತನಿಖೆ ನಡೆಸುವ ಕುರಿತು - ಆದೇಶ.

ಓದಲಾಗಿದೆ:
1. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಮು.ಮಂ.ಆ.ಕಾ/4255/2025, ದಿನಾಂಕ: 28.03.2025.
2. ಕಾರಣ ಕೇಳುವ ನೋಟೀಸ್ ಸಂಖ್ಯೆ: ವಾಕೈ 96 ಕೈಸೇವಿ 2025, ದಿನಾಂಕ: 05.04.2025.
3. ಶ್ರೀ ಕೆ.ಮೊಹಮ್ಮದ್ ಇರ್ಫಾನ್ ಇವರ ಪತ್ರದ ಸಂಖ್ಯೆ: ಕರಾತೆನಾಅಮಂ/ವ್ಯನಿವೈಕ/2024-25, ದಿನಾಂಕ:17.04.2025.
4. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ: ಮು.ಮಂ./ಆ.ಕಾ.(1)/9949690/2025, ದಿನಾಂಕ:24.04.2025.
5. ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರದ ಸಂಖ್ಯೆ: ಕೆಎಸ್‌ಸಿಡಿಸಿ/ಅಧ್ಯಕ್ಷರು/2025/29, ದಿನಾಂಕ:29.04.2025.

* * * * *

<u>ಪ್ರಸ್ತಾವನೆ:</u>

ಶ್ರೀ ನಟರಾಜ್ ಜಾನಕಿರಾಮ್, ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ಸದರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರೂ ಆಗಿರುವ ಶ್ರೀ ಕೆ. ಮೊಹಮ್ಮದ್ ಇರ್ಫಾನ್, ಅಪರ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ವಿರುದ್ಧ ಕರ್ತವ್ಯ ಲೋಪ, ನಿರ್ಲಕ್ಷ್ಯತನ, ಆರ್ಥಿಕ ನಷ್ಟ ಮುಂತಾದ ಹಲವಾರು ಆರೋಪಗಳನ್ನು ಮಾಡಿ ಸದರಿ ಅಧಿಕಾರಿಯನ್ನು ಅಮಾನತ್ತುಗೊಳಿಸಿ ಶಿಸ್ತು ಕ್ರಮಕೈಗೊಳ್ಳಲು ಸಂಬಂಧಿಸಿದವರಿಗೆ ಸೂಚಿಸುವಂತೆ ದಿನಾಂಕ:28.03.2025 ರ ಪತ್ರದಲ್ಲಿ ಮಾನ್ಯ ಮುಖ್ಯ ಮಂತ್ರಿಯವರಿಗೆ ದೂರು ಸಲ್ಲಿಸಿರುತ್ತಾರೆ.

ಇದಕ್ಕೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಟಿಪ್ಪಣಿಯಲ್ಲಿ ಶ್ರೀ ನಟರಾಜ್ ಜಾನಕಿರಾಮ್, ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಂದ ಸ್ವೀಕೃತವಾಗಿರುವ ಸ್ವಯಂವೇದ್ಯದ ಪತ್ರದಲ್ಲಿ ಸದರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಕೆ. ಮೊಹಮದ್ ಇರ್ಫಾನ್ ರವರು ನಿಗಮದ ಕಾರ್ಯಕ್ರಮಗಳನ್ನು ನಿರ್ವಹಿಸುವಲ್ಲಿ ವಿಫಲರಾಗಿದ್ದು, ನಿಗಮದ ಪ್ರಗತಿಯು ಕುಂಠಿತವಾಗಿದೆ. ಸರ್ಕಾರಿ ಕೆಲಸ ಕಾರ್ಯಗಳಲ್ಲಿ ನಿರ್ಲಕ್ಷ್ಯತೆಯಿಂದ ವರ್ತಿಸಿ ಕರ್ತವ್ಯ ಲೋಪವೆಸಗಿರುತ್ತಾರೆ. ಆದುದರಿಂದ ಸದರಿಯವರನ್ನು ಅಮಾನತ್ತು ಮಾಡಿ ಶಿಸ್ತುಕ್ರಮ ಕೈಗೊಳ್ಳಲು ಸಂಬಂಧಿಸಿದವರಿಗೆ ಸೂಚಿಸುವಂತೆ ಕೋರಿರುವುದರಿಂದ, ಸದರಿ ಕೋರಿಕೆಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿರುತ್ತದೆ.

ಶ್ರೀ ಕೆ.ಮೊಹಮ್ಮದ್ ಇರ್ಫಾನ್, ಅಪರ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿಯೋಜನೆ ಮೇರೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ನಿಗಮದ ಕಾರ್ಯಕ್ರಮಗಳನ್ನು ನಿರ್ವಹಿಸುವಲ್ಲಿ ವಿಫಲರಾಗಿ, ಪ್ರಗತಿ ಕುಂಠಿತವಾಗಿ, ಸರ್ಕಾರಿ ಕೆಲಸ ಕಾರ್ಯಗಳಲ್ಲಿ ನಿರ್ಲಕ್ಷ್ಯತೆಯಿಂದ ವರ್ತಿಸುತ್ತಾ ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 2021 ರ ನಿಯಮ 3(1) (i) (ii) (iii) ಮತ್ತು (iv) ರ ಮೇರೆಗೆ ಕರ್ತವ್ಯ ಲೋಪವೆಸಗಿ, ಸರ್ಕಾರಿ ನೌಕರರಿಗೆ ಸಲ್ಲದ ರೀತಿಯಲ್ಲಿ ವರ್ತಿಸಿರುವ ಆರೋಪಕ್ಕೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಸದರಿ ಅಧಿಕಾರಿಯವರಿಗೆ ಸಮಜಾಯಿಷಿ ಕೇಳಿ ಕಾರಣ ಕೇಳುವ ನೋಟೀಸ್ ಹೊರಡಿಸಲಾಗಿತ್ತು.

ಶ್ರೀ ಕೆ.ಮೊಹಮ್ಮದ್ ಇರ್ಫಾನ್, ಅಪರ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿಯೋಜನೆ ಮೇರೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ದಿನಾಂಕ:05.04.2025ರ ಕಾರಣ ಕೇಳುವ ನೋಟೀಸ್‌ಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ಮುಂದುವರೆದು, ಶ್ರೀ ನಟರಾಜ್ ಜಾನಕಿರಾಮ್, ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ದಿನಾಂಕ:21.04.2025 ರಂದು ಮಾನ್ಯ ಮುಖ್ಯಮಂತ್ರಿಯವರಿಗೆ ಸಲ್ಲಿಸಿರುವ ಪತ್ರಗಳಲ್ಲಿ ಪ್ರಸ್ತಾಪಿತ ಅಧಿಕಾರಿಯ ವಿರುದ್ಧ ಹೆಚ್ಚುವರಿ ಆರೋಪಗಳನ್ನು ಮಾಡಿರುತ್ತಾರೆ. ಸದರಿ ದೂರುಗಳ ಕುರಿತು ಪರಿಶೀಲಿಸಿ ಕೂಡಲೇ ಕಡತ ಮಂಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಟಿಪ್ಪಣಿಯಲ್ಲಿ ಸೂಚಿಸಲಾಗಿರುತ್ತದೆ.

ಶ್ರೀ ನಟರಾಜ್ ಜಾನಕಿರಾಮ್, ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (5)ರನ್ವಯ ದಿನಾಂಕ:29.04.2025 ರಂದು ಸಲ್ಲಿಸಿರುವ ಪತ್ರದಲ್ಲಿ ಪ್ರಸ್ತಾಪಿತ ಅಧಿಕಾರಿಯ ವಿರುದ್ಧ ಹೆಚ್ಚುವರಿ ಆರೋಪಗಳನ್ನು ಮಾಡಿರುತ್ತಾರೆ.

ಆದುದರಿಂದ, ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ನೀಡಿರುವ ದೂರು ಅರ್ಜಿಗಳಲ್ಲಿ ಒಳಗೊಂಡ ಶ್ರೀ ಕೆ. ಮೊಹಮ್ಮದ್ ಇರ್ಫಾನ್, ಅಪರ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿಯೋಜನೆ ಮೇರೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರ ವಿರುದ್ಧದ ಎಲ್ಲಾ ಆರೋಪಗಳ ಸಂಬಂಧ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ತನಿಖಾಧಿಕಾರಿಯನ್ನು ನೇಮಿಸಿ, ಪ್ರಾಥಮಿಕ ತನಿಖೆ ನಡೆಸಿ ವರದಿಯನ್ನು ಪಡೆಯಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ವಾಕೈ 96 ಕೈಸೇವಿ 2025, ಬೆಂಗಳೂರು ದಿನಾಂಕ: 13.05.2025.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ. ಮೊಹಮ್ಮದ್ ಇರ್ಫಾನ್, ಅಪರ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿಯೋಜನೆ ಮೇರೆಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರ ವಿರುದ್ಧ ಕರ್ತವ್ಯ ಲೋಪ, ನಿರ್ಲಕ್ಷ್ಯತನ, ಆರ್ಥಿಕ ನಷ್ಟಗಳ ಬಗ್ಗೆ, ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು ಮಾಡಿರುವ ಆರೋಪಗಳ ಕುರಿತು ಪ್ರಾಥಮಿಕ ತನಿಖೆಯನ್ನು ನಡೆಸಲು "ನಿರ್ದೇಶಕರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ (ಎಂಎಸ್‌ಎಂಇ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ. 49, ಖನಿಜಭವನ, ಡಿ. ದೇವರಾಜ್ ಅರಸ್ ರಸ್ತೆ, ಬೆಂಗಳೂರು – 560 001" ಇವರನ್ನು ತನಿಖಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

--3

ತನಿಖಾಧಿಕಾರಿಗಳು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಸಂಸ್ಥೆಯಿಂದ ಅಗತ್ಯ ದಾಖಲಾತಿಗಳನ್ನು ಪಡೆದು, ಪರಿಶೀಲಿಸಿ, ತನಿಖೆ ಕೈಗೊಂಡು, ತನಿಖಾ ವರದಿಯನ್ನು 2 ತಿಂಗಳ ಅವಧಿಯೊಳಗೆ ಶಿಸ್ತು ಪ್ರಾಧಿಕಾರಕ್ಕೆ ಸಲ್ಲಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಉಮಾದೇವಿ .ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ
(ಸೇವೆಗಳು ಮತ್ತು ಸಮನ್ವಯ)

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ)/(ಲೆಕ್ಕಪತ್ರ) / (ಆಡಿಟ್ 1 & 2), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ (ಎಂಎಸ್ಎಂಇ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ. 49, ಖನಿಜಭವನ, ಡಿ. ದೇವರಾಜ್ ಅರಸ್ ರಸ್ತೆ, ಬೆಂಗಳೂರು - 560001.
3. ಅಧ್ಯಕ್ಷರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಎಸ್.ಎಫ್-4 &ಎಸ್.ಎಫ್-5, ಸ್ಟರ್ಲಿಂಗ್ ಟವರ್ಸ್ (ಗಾರ್ಮೆಂಟ್ ಕಾಂಪ್ಲೆಕ್ಸ್), ಕೆಎಸ್ಎಸ್ಐಡಿಸಿ ಇಂಡಸ್ಟ್ರಿಯಲ್ ಎಸ್ಟೇಟ್, 6ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-560010.
4. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯ, ನಂ. 49, ಖನಿಜಭವನ, ಡಿ. ದೇವರಾಜ್ ಅರಸ್ ರಸ್ತೆ, ಬೆಂಗಳೂರು – 560001.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ, ಎಸ್.ಎಫ್-4 &ಎಸ್.ಎಫ್-5, ಸ್ಟರ್ಲಿಂಗ್ ಟವರ್ಸ್ (ಗಾರ್ಮೆಂಟ್ ಕಾಂಪ್ಲೆಕ್ಸ್), ಕೆಎಸ್ಎಸ್ಐಡಿಸಿ ಇಂಡಸ್ಟ್ರಿಯಲ್ ಎಸ್ಟೇಟ್, 6ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-560010.
6. ಅಪರ ನಿರ್ದೇಶಕರು (ಆಡಳಿತ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಜಂಟಿ ನಿರ್ದೇಶಕರು (ತಾಂತ್ರಿಕ ಕೋಶ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.

ಪ್ರತಿಗಳು:

1. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿಯವರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ (ಎಂಎಸ್ಎಂಇ &ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
5. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.